**ಕರ್ನಾಟಕ ಸರ್ಕಾರ**

ಸಂಖ್ಯೆ:ಕಪಂರಾಅ/ಅಭಿವೃದ್ಧಿ/78/2020

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:07-01-2023.

## ಜಂಟಿ ಸುತ್ತೋಲೆ

ವಿಷಯ: ರಾಜ್ಯದ ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ " ಓದುವ ಬೆಳಕು ಕಾರ್ಯಕ್ರಮ ಅನುಷ್ಠಾನ ಮತ್ತು ಮಕ್ಕಳನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಉಚಿತವಾಗಿ ನೋಂದಾಯಿಸುವ ಕುರಿತು.

ಉಲ್ಲೇಖ: ಜಂಟಿ ಸುತ್ತೋಲೆ ಸಂಖ್ಯೆ: ಕಪಂರಾ ಅಭಿವೃದ್ಧಿ /78/2021, ದಿನಾಂಕ: 04.02.2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಜಂಟಿ ಸುತ್ತೋಲೆಯಲ್ಲಿ ತಿಳಿಸಿರುವಂತೆ ಗ್ರಾಮೀಣ ಭಾಗದ ಮಕ್ಕಳ ಕಲಿಕೆಗೆ ನೆರವಾಗುವ ದೃಷ್ಟಿಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ರಾಜ್ಯದ ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ 6-18ರ ವಯಸ್ಸಿನ ಮಕ್ಕಳಿಗೆ ಪ್ರತ್ಯೇಕ ಓದುವ ವಿಭಾಗ ಹಾಗೂ ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಡಿಜಿಟಲ್ ಗ್ರಂಥಾಲಯಗಳಾಗಿ ನವೀಕರಿಸಲು ಗ್ರಾಮ ಪಂಚಾಯಿತಿಗಳಲ್ಲಿ "ಓದುವ ಬೆಳಕು" ಯೋಜನೆಯಡಿ ಅನುಷ್ಠಾನಗೊಳಿಸಲು ಆದೇಶಿಸಲಾಗಿರುತ್ತದೆ.

ಮುಂದುವರೆದು, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಭಾಗಿತ್ವದಲ್ಲಿ "ಓದುವ ಬೆಳಕು" ಯೋಜನೆಯನ್ನು ಮತ್ತೊಮ್ಮೆ ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಗ್ರಾಮಗಳಲ್ಲಿನ 6-18 ರ ವಯಸ್ಸಿನ ಮಕ್ಕಳನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಉಚಿತವಾಗಿ ನೋಂದಾಯಿಸಲು ಸದರಿ ಸುತ್ತೋಲೆಯಲ್ಲಿ ತಿಳಿಸಿ, ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಮಕ್ಕಳನ್ನು ನೋಂದಾಯಿಸಲಾಗಿದೆ.

ಅದರಂತೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಭಾಗಿತ್ವದಲ್ಲಿ "ಓದುವ ಬೆಳಕು" ಯೋಜನೆಯಡಿಯಲ್ಲಿ ಗ್ರಾಮೀಣ ಭಾಗದ 6-18 ರ ವಯಸ್ಸಿನ ಪ್ರತಿ ಮಗುವಿನ ಕಲಿಕೆಗೆ ನೆರವಾಗುವ ದೃಷ್ಟಿಯಿಂದ ಈ ಕೆಳಕಂಡ ಕ್ರಮಗಳನ್ನು ಅನುಸರಿಸಲು ಆದೇಶಿಸಿದೆ.

- ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಎಲ್ಲಾ ಶಾಲೆಗಳಲ್ಲಿನ 6-18ರ ವಯಸ್ಸಿನ ಎಲ್ಲಾ ಮಕ್ಕಳನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಉಚಿತವಾಗಿ ನೋಂದಾಯಿಸಲು ಶಾಲಾ ಶಿಕ್ಷಕರು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕ್ರಮವಹಿಸುವುದು.
- ಶಾಲೆ ಬಿಟ್ಟ ಮಕ್ಕಳನ್ನು ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಲು "ಮನೆ-ಮನೆ" ಸಮೀಕ್ಷೆಯು ಈಗಾಗಲೇ ಪೂರ್ಣಗೊಂಡಿದ್ದು, ಸಮೀಕ್ಷೆಯಲ್ಲಿ ಗುರುತಿಸಲಾದ ಮಕ್ಕಳ ಪೈಕಿ ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ನೋಂದಾಯಿತವಲ್ಲದ ಮಕ್ಕಳನ್ನು ಪಂಚಾಯಿತಿ ಗ್ರಂಥಾಲಯಗಳಲ್ಲಿ ಉಚಿತವಾಗಿ ನೋಂದಾಯಿಸುವುದು.
- ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶಾಲೆಗಳಲ್ಲಿನ ಮಕ್ಕಳನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ಸಂಪರ್ಕವನ್ನು ಸ್ಥಾಪಿಸಲು ಶಾಲಾ ಶಿಕ್ಷಕರು ಮಕ್ಕಳ ಜೊತೆ ವಾರಕ್ಕೊಮ್ಮೆ/15 ದಿವಸಗಳಿಗೊಮ್ಮೆ ಗ್ರಾಮ ಪಂಚಾಯಿತಿ ಗ್ರಂಥಾಲಯಕ್ಕೆ ಭೇಟಿ ನೀಡುವುದು ಮತ್ತು ಮಕ್ಕಳಿಗೆ ಗ್ರಂಥಾಲಯಗಳಲ್ಲಿರುವ ಪುಸ್ತಕವನ್ನು ಎರವಲು ತೆಗೆದುಕೊಳ್ಳಲು ಸಹಕರಿಸುವುದು.

- ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶಾಲೆಯು, ಗ್ರಂಥಾಲಯಕ್ಕೆ ದೂರವಿದ್ದರೆ ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರು ವಾರಕ್ಕೊಮ್ಮೆ/15 ದಿವಸಗಳಿಗೊಮ್ಮೆ ಮಕ್ಕಳಿಗೆ ಅನುಕೂಲವಾಗುವ ಆಸಕ್ತಿಯಿರುವ ಪುಸ್ತಕಗಳನ್ನು ಶಾಲೆಗೆ ತೆಗೆದುಕೊಂಡು ಹೋಗಿ ಪುಸ್ತಕವನ್ನು ಎರವಲು ತೆಗೆದುಕೊಳ್ಳಲು ಅಥವಾ ಶಾಲೆಯಲ್ಲಿ ಓದಲು ಸಹಕರಿಸುವುದು.

ಈ ಮೇಲೆ ತಿಳಿಸಿರುವ ಕ್ರಮಗಳನ್ನು ಅನುಸರಿಸುವಂತೆ ಸಂಬಂಧಪಟ್ಟ ಆಯಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯಿತಿ ರವರು ಮೇಲ್ವಿಚಾರಣೆ ನಡೆಸಿ, ಅಗತ್ಯವಿರುವ ಬೆಂಬಲ ಮತ್ತು ಮಾರ್ಗದರ್ಶನವನ್ನು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಗೆ ಬರುವ ಶಾಲೆಗಳಿಗೆ ನೀಡುವುದು ಇದರ ಮೂಲಕ 'ಓದುವ ಬೆಳಕು' ಕಾರ್ಯಕ್ರಮದ ಯೋಜನೆಯು ಗ್ರಾಮೀಣ ಭಾಗದ ಎಲ್ಲಾ ಮಕ್ಕಳಿಗೂ ತಲುಪುವಂತೆ ಗುರಿಯನ್ನು ಹೊಂದಿ, ಯಶಸ್ವಿಯಾಗಲು ಸೂಕ್ತ ಕ್ರಮವಹಿಸುವುದು.

(ರಿತೇಶ್ ಕುಮಾರ್ ಸಿಂಗ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ.

(ಉಮಾ ಮಹಾದೇವನ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ. ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರುಗಳು ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಮುಖ್ಯ ಗ್ರಂಥಾಲಯಾಧಿಕಾರಿಗಳಿಗೆ.
4. ರಾಜ್ಯದ ಎಲ್ಲಾ ತಾಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು (ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
5. ರಾಜ್ಯ ಎಲ್ಲಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ(ಜಿಲ್ಲಾ ಉಪ ನಿರ್ದೇಶಕರುಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತ ಇಲಾಖೆ ಮುಖಾಂತರ)
6. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ (ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

ಪ್ರತಿಯನ್ನು ಮಾಹಿತಿಗಾಗಿ.

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ.ರಸ್ತೆ, ಬೆಂಗಳೂರು.
4. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಗೋಪುರ, 4ನೇ ಮಹಡಿ, ಅಂಬೇಡ್ಕರ್ ವೀಧಿ, ಬೆಂಗಳೂರು-560001.
5. ಕಛೇರಿ ಪ್ರತಿ.